DFA/805578

ಪ್ರ-102
ನಿ-72, 146ನೇ ಅಧಿವೇಶನ
ಕಂಪ್ಯೂಟರ್

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಕೆ.ಟಿ. ಶ್ರೀಕಂಠೇಗೌಡರು ಎಂ.ಎ ಮತ್ತು ಶ್ರೀ ಎಸ್. ಭೋಜೇಗೌಡರು ಇವರು ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

2019 ರಲ್ಲಿ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆ ಆರಂಭವಾಗಿದ್ದು, 2019 ಕೋವಿಡ್ ಕಾರಣದಿಂದಾಗಿ 2021 ನವೆಂಬರ್‌ನಲ್ಲಿ ಪ್ರಕ್ರಿಯೆಯು 2 ವರ್ಷ ತಡವಾಗಿ ಅರ್ಜಿಸಲ್ಲಿಸಲು ಆಹ್ವಾನಿಸಲಾಗಿದೆ. ಹಾಗಾಗಿ ಈ 2 ವರ್ಷಗಳನ್ನು ಕೋವಿಡ್ -19 ವರ್ಷವೆಂದು ಪರಿಗಣಿಸಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ವಯೋಮಿತಿ ಸಡಿಲಿಕೆಯನ್ನು ನೀಡಬೇಕೆಂದು ಮತ್ತು Notification No: EP89PBS2021ರ ಪ್ರಕಾರ ಪ್ರಾಥಮಿಕ ಶಾಲಾ ಶಿಕ್ಷರಿಗೂ ಸಹ 2 ವರ್ಷಗಳ ವಯೋಮಿತಿ ಸಡಿಲಿಕೆಯನ್ನು ನೀಡಿರುತ್ತಾರೆ. ಇದನ್ನು ಪರಿಗಣಿಸಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೂ 2 ವರ್ಷಗಳ ವಯೋಮಿತಿ ಸಡಿಲಿಕೆ ನೀಡಬೇಕೆಂಬ ವಿಷಯವನ್ನು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ-3), ದಿನಾಂಕ: 08.07.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ: 19.10.2020 ರಲ್ಲಿ ಪ್ರಕಟಿಸಲಾಗಿದೆ. ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019, ದಿನಾಂಕ: 26.08.2021ರಂದು ಹೊರಡಿಸಿದ್ದು, ಅದರಂತೆ, ದಿನಾಂಕ: 20.11.2021ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಅಲ್ಲದೆ, ಈಗಾಗಲೇ ದಿನಾಂಕ: 12.03.2022 ರಿಂದ 16.03.2022 ರವರೆಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಸಹ ನಡೆಸಲಾಗಿದೆ.

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರನ್ವಯ ನಾಗರೀಕ ಸೇವೆಗಳಿಗೆ ಗರಿಷ್ಠ ವಯೋಮಿತಿಯನ್ನು ಸಾಮಾನ್ಯ ವರ್ಗಕ್ಕೆ 35 ವರ್ಷಗಳು, ಇತರೆ ಹಿಂದುಳಿದ ವರ್ಗಕ್ಕೆ 38 ವರ್ಷಗಳು ಹಾಗೂ ಪರಿಶಿಷ್ಟ ಜಾತಿ/ ಪಂಗಡ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳಿಗೆ 40 ವರ್ಷಗಳಿಗೆ ನಿಗಧಿಪಡಿಸಲಾಗಿದೆ. ಆದರೆ, ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ರೂಪಿಸಲಾಗಿರುವ ವಿಶೇಷ ನೇಮಕಾತಿ ನಿಯಮಾವಳಿಗಳಲ್ಲಿ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಈಗಾಗಲೇ ಗರಿಷ್ಠ ವಯೋಮಿತಿಯನ್ನು ಸಾಮಾನ್ಯ ವರ್ಗ 40 ವರ್ಷಗಳು, ಇತರೆ ಹಿಂದುಳಿದ ವರ್ಗಕ್ಕೆ 43 ವರ್ಷಗಳು ಹಾಗೂ ಪರಿಶಿಷ್ಟ ಜಾತಿ / ಪಂಗಡ ಪ್ರವರ್ಗ-1ರ ಅಭ್ಯರ್ಥಿಗಳಿಗೆ 45 ವರ್ಷಗಳ ವಯೋಮಿತಿಯನ್ನು ನಿಗಧಿಪಡಿಸಲಾಗಿದೆ. ಅಂದರೆ, ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು ಗರಿಷ್ಠ ವಯೋಮಿತಿಯನ್ನು ಈಗಾಗಲೇ 5 ವರ್ಷಗಳಿಗೆ ಹೆಚ್ಚಿಸಲಾಗಿದೆ.

**ಇಡಿ 127 ಡಿಸಿಇ 2022**

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು



Generated from eOffice by ASHWATH NARAYAN C N , EDH-MIN(ANCN), HIGHER EDUCATION MINISTER, EDUCATION HIGHER SEC on 11/07/2022 01:32 PM